ISSN : 2581-7728
Tumbe International e-Magazine
A Multilanguage Magazine
Issue-2
Volume-5
July-Dec: 2022

# ಸುಭಾಷ್ ಚಂದ್ರ ಬೋಸ್

**ವೀರೇಶ್ ಭದ್ರಗೌಡ**
U11GT21A0065
ಬಿಎ ಮೊದಲನೇ ವರ್ಷ, ದ್ವಿತೀಯ ಸೆಮಿಸ್ಟರ್
ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತುಮಕೂರು -572104
veereshb2001@gmail.com Ph.no: 9380789642

ಸುಭಾಷ್ ಚಂದ್ರ ಬೋಸ್ [ಜನನ: ಜನವರಿ ೨೩, ೧೮೯೭ — ಮರಣ (ಮಾಹಿತಿ ಇಲ್ಲ)] ನೇತಾಜಿ ಎಂದೇ ಪ್ರಸಿದ್ಧರಾದ ಭಾರತದ ಸ್ವಾತಂತ್ರ್ಯ ಸಂಗ್ರಾಮದ ಪ್ರಮುಖ ಜನನಾಯಕರಲ್ಲಿ ಒಬ್ಬರು. ಸ್ವಾಮಿ ವಿವೇಕಾನಂದರ ವಿಚಾರಗಳಿಂದ ಪ್ರಭಾವಿತರಾದ ಇವರು ಭಾರತ ಸ್ವಾತಂತ್ರ ಹೋರಾಟದಲ್ಲಿ ಅತ್ಯಂತ ವಿಶಿಷ್ಟ ಪಾತ್ರವಹಿಸಿದವರು. ಅವರು ಭಾರತದ ಮಹಾನ್ ವ್ಯಕ್ತಿಯಾಗಿದ್ದರು. ಅವರು ಭಾರತೀಯ ಸ್ವಾತಂತ್ರ್ಯದ ಕಾರಣಕ್ಕಾಗಿಯೇ ಹೋರಾಡಿದ್ದರು. ಭಾರತವು ಸ್ವಾತಂತ್ರ್ಯ ಪಡೆಯಲು ಭಾರತಕ್ಕೆ ಸಹಾಯ ಮಾಡಿದ ಜರ್ಮನಿ, ಜಪಾನ್, ರಷ್ಯಾಗಳಂತಹ ದೇಶಗಳು ಬ್ರಿಟಿಷ್ ವಿರುದ್ಧ ಹೋರಾಡಲು ಮತ್ತು ಸ್ವಾತಂತ್ರ್ಯ ಪಡೆಯಲು ಬೋಸರಿಗೆ ಸಹಾಯ ಮಾಡಲು ಸಿದ್ಧವಾಗಿದ್ದವು ಎಂದು ಭಾವಿಸಲಾಗಿವೆ. ಗಾಂಧಿಯವರು ಸ್ವಾತಂತ್ರ್ಯ ಪಡೆಯುವ ಬಗೆಗೆ ಒಂದೇ ಮಾರ್ಗದಲ್ಲಿದ್ದರು. ಆದರೆ ಬೋಸ್ ಸ್ವಾತಂತ್ರ್ಯಕ್ಕೆ ಸಶಸ್ತ್ರ ಹೋರಾಟವನ್ನೂ ಒಪ್ಪಿದ್ದರು. ಅವರ ಹೋರಾಟವು ವಿಫಲವಾದರೂ, ಭಾರತ ಸ್ವಾತಂತ್ರ ಪಡೆಯುವಲ್ಲಿ ಜನರನ್ನು ಉತ್ತೇಜಿಸಿ ತನ್ನದೇ ಆದ ಕೊಡಿಗೆ ನೀಡಿದೆ ಎಂದು ಭಾವಿಸಲಾಗಿದೆ.

## ವಿದ್ಯಾಭ್ಯಾಸ



ಸುಭಾಷ್ ಚಂದ್ರ ಬೋಸ್ ಜನಿಸಿದ್ದು ೧೮೯೭ರ ಜನವರಿ ೨೩ರಂದು, ಒಡಿಶಾದ ಕಟಕ್‌ನಲ್ಲಿ. ತಂದೆ ಜಾನಕೀನಾಥ ಬೋಸ್, ತಾಯಿ ಪ್ರಭಾವತಿ. ಆ ದಂಪತಿಗಳ ೧೪ ಜನ ಮಕ್ಕಳಲ್ಲಿ ಸುಭಾಷ್ ೯ ನೇಯವರು.ಕಟಕ್‌ನಲ್ಲಿ ರಯಾವೆನ್‌ಶಾ ಕೊಲಿಜಿಯೇಟ್ ಶಾಲೆಯಲ್ಲಿ ಪ್ರಾಥಮಿಕ ವ್ಯಾಸಂಗ, ಅಲ್ಲಿ ಮುಖ್ಯೋಪಾಧ್ಯಾಯ ಬೇಣಿಮಾಧವದಾಸ್‌ರ ರಿಂದ ಪ್ರೇರಣೆ, ಮುಂದೆ ವಿವೇಕಾನಂದರ ಸಾಹಿತ್ಯಗಳು, ಪತ್ರಗಳು ಮತ್ತು 'ಕೊಲೊಂಬೋದಿಂದ ಆಲ್ಮೋರಾಕ್ಕೆ' ಉಪನ್ಯಾಸಗಳಿಂದ ಪ್ರಭಾವಿತರಾದ ಬೋಸರು ಅರವಿಂದರ 'ಆರ್ಯ' ಮಾಸಪತ್ರಿಕೆಯ ತಪ್ಪದ ಓದುಗ!

೧೯೧೯ರಲ್ಲಿ ತತ್ವಶಾಸ್ತ್ರ ವಿಭಾಗದಲ್ಲಿ ಬಿ.ಎ. ಪದವಿ, ನಂತರ ೧೯೧೯ರ ಸೆಪ್ಟೆಂಬರ್ ೧೫ರಂದು ಐ.ಸಿ.ಎಸ್ ಪರೀಕ್ಷೆಗಾಗಿ ಇಂಗ್ಲೆಂಡಿಗೆ ಪಯಣ. ೧೯೨೦ರ

ಸೆಪ್ಟಂಬರ್‌ನಲ್ಲಿ ನಾಲ್ಕನೇ ಸ್ಥಾನಿಗರಾಗಿ ಐ.ಸಿ.ಎಸ್ ಪದವಿ ಪ್ರಾಪ್ತಿ.ವಿದೇಶೀ ನೌಕರಿ ಒಲ್ಲೆ ಎಂದು ಗಳಿಸಿದ್ದ ಐ.ಸಿ.ಎಸ್. ಪದವಿಯನ್ನು ೧೯೨೧ರ ಎಪ್ರಿಲ್ ೨೨ರಂದು ಬ್ರಿಟಿಷ್ ಸರ್ಕಾರದ ಭಾರತ ವ್ಯವಹಾರ ಸಚಿವ ಎಡ್ವಿನ್ ಮಾಂಟೆಗುಗೆ ಪತ್ರವೊಂದನ್ನು ಬರೆದು ಮರಳಿಸಿದ್ದರು ಬೋಸ್!

೨೦ ತಿಂಗಳ ಇಂಗ್ಲೆಂಡ್ ವಾಸದ ನಂತರ ೧೯೨೧ರ ಜುಲೈ ೧೬ರಂದು ಮುಂಬಯಿಗೆ ಮರಳಿದರು ಬೋಸ್. ಅಂದೇ ಗಾಂಧೀಜಿ ಜತೆ ಮೊದಲ ಭೇಟಿ. ೧೯೨೧ರ ಆಗಸ್ಟ್‌ನಿಂದ ಚಿತ್ತರಂಜನ್ ದಾಸ್‌ರ ಮಾರ್ಗದರ್ಶನದಲ್ಲಿ ಯುವಕರ ಸಂಘಟನೆಗೆ ಆದ್ಯತೆ. ಚಳುವಳಿಯ ಸಂದರ್ಭವೊಂದರಲ್ಲಿ ಮ್ಯಾಜಿಸ್ಟ್ರೇಟರು ೬ ತಿಂಗಳ ಸಜೆ ಘೋಷಿಸಿದಾಗ 'ಬರಿಯ ೬ ತಿಂಗಳೇ? ನನ್ನದೇನು ಕೋಳಿಕದ್ದ ಅಪರಾಧವೇ?' ಎಂದಿದ್ದರು ಬೋಸ್!

### ರಾಷ್ಟ್ರ ನಿರ್ಮಾಣದ ಜವಾಬ್ದಾರಿ

ರಾಷ್ಟ್ರ ನಿರ್ಮಾಣದ ಜವಾಬ್ದಾರಿಯುತ ಸ್ಥಾನದಲ್ಲಿದ್ದು ರಾಷ್ಟ್ರಹಿತಕ್ಕೆ ಧಕ್ಕೆಯಾಗುವ ಯಾವುದೇ ವಿಷಯಗಳಲ್ಲಿ ದುರ್ಬಲನೀತಿ ಹೊಂದಿರಬಾರದೆಂಬ ಸುಭಾಷ್‌ರ ದಿಟ್ಟನಿಲುವಿನ ಪ್ರತಿಧ್ವನಿಯಾಗಿತ್ತು ಆ ಮಾತು. ಕಾಂಗ್ರೆಸ್‌ನ ಬಲಹೀನ ನಾಯಕತ್ವ, ದುರ್ಬಲ ಒಪ್ಪಂದಗಳು, ಸ್ವಾಭಿಮಾನ ಶೂನ್ಯ ವರ್ತನೆಗೆ ಪ್ರತಿಯಾಗಿ ಆತ್ಮಾಭಿಮಾನದ ಸ್ವರಾಜ್ಯಹೋರಾಟಕ್ಕೆ ಬಲತುಂಬಿದವರು ಸುಭಾಷರು.

ತಾನು ಕಷ್ಟಪಟ್ಟುಗಳಿಸಿದ್ದ ಐ.ಸಿ.ಎಸ್. ಪದವಿಯನ್ನೇ ತಿರಸ್ಕರಿಸಿ, ಸ್ವಾತಂತ್ರ್ಯ ಸಂಗ್ರಾಮಕ್ಕೆ ಧುಮುಕಿದ ಬೋಸ್‌ರಿಗಿದ್ದ ರಾಜಕೀಯ ಚಿಂತನೆಯ ವೈಶಾಲ್ಯತೆ ಆ ಕಾಲಮಾನದ ಯಾರೊಬ್ಬರಲ್ಲೂ ಇರಲಿಲ್ಲ. ಆಸ್ಟ್ರಿಯಾ, ಇಂಗ್ಲೆಂಡ್, ಜರ್ಮನಿ, ಜಪಾನ್ ಸೇರಿದಂತೆ ಹತ್ತಾರು ರಾಷ್ಟ್ರಗಳಲ್ಲಿ ಮಿಂಚಿನ ಓಡಾಟ ನಡೆಸಿ ಭಾರತೀಯ ಸ್ವರಾಜ್ಯ ಹೋರಾಟದ ದನಿಗೆ ತೀವ್ರತೆ ತಂದಿದ್ದ ಬೋಸರು, ತಾನು ನಂಬಿದ್ದ ಕ್ರಾಂತಿಪಥದಲ್ಲಿ ಎಂದೂ ರಾಜಿಮಾಡಿದವರಲ್ಲ.

ಶೀಘ್ರ ಸ್ವಾತಂತ್ರ್ಯಪ್ರಾಪ್ತಿಗಾಗಿ ಅವರು ಮಂಡಿಸುತ್ತಿದ್ದ ವಾದಗಳು, ಅದಕ್ಕಾಗಿ ಶ್ರಮಿಸಬೇಕಾದ ತ್ವರಿತ ಸಿದ್ಧತೆಗಳ ಕುರಿತು ಬೋಸ್‌ರ ನಿಲುವುಗಳೆಲ್ಲ ಕಾಂಗ್ರೆಸ್‌ನ ಮಂದಗಾಮಿ ಗುಂಪಿಗೆ ಅಸಹನೀಯವಾಗಿತ್ತು. ಸ್ವತಃ ಗಾಂಧೀಯವರೇ ಹಲವು ಬಾರಿ ಬೋಸ್‌ರನ್ನು ಟೀಕಿಸಿದ್ದರು! ಅವರಿಗೆ ದೂರಗಾಮಿ ಚಿಂತನೆ ಇಲ್ಲ ಎಂಬ ಆರೋಪ. ಆದರೆ ೧೯೩೮ರಲ್ಲಿ ಭಾರತದ ವಿಭಜನೆಯ ಮುಸ್ಲಿಂಲೀಗ್- ಬ್ರಿಟಿಷರ ತಂತ್ರಗಾರಿಕೆಯ ಕುರಿತು ಮೊದಲಬಾರಿಗೆ ಬಹಿರಂಗವಾಗಿ ಎಚ್ಚರಿಸಿದರೂ ಮಂದಗಾಮಿಗಳಿಗೆ ಕೇಳಿಸಲಿಲ್ಲ. ಪರಿಣಾಮವಾಗಿ ೯ ವರ್ಷದಲ್ಲೇ ದೇಶ ಹೋಳಾಯಿತು! ಬೋಸ್‌ರ ದೂರಗಾಮಿ ಚಿಂತನೆಗಳಿಗೂ ಕವಡೆ ಕಿಮ್ಮತ್ತಿನ ಬೆಲೆ ಕೊಡದ ಕಾಂಗ್ರೆಸ್‌ನಿಂದ ಸ್ವತಃ ಹೊರಬಂದವರು ಬೋಸ್.

### ಸ್ವರಾಜ್ಯಪಕ್ಷ ಸ್ಥಾಪನೆ

ಕಾಂಗ್ರೆಸ್‌ನ ಡೋಲಾಯಮಾನ ನೀತಿಗಳಿಗೆ ಬೇಸತ್ತು ಚಿತ್ತರಂಜನ್‌ದಾಸ್‌ರಿಂದ 'ಸ್ವರಾಜ್ಯಪಕ್ಷ ಸ್ಥಾಪನೆ. ಬೋಸ್‌ರು ದಾಸ್‌ರ ಜತೆಗೇ ಚಟುವಟಿಕೆಗಳಲ್ಲಿ ಭಾಗಿ. ೧೯೨೩ರ ಅಕ್ಟೋಬರ್‌ನಿಂದ ದಾಸ್‌ರು ಸ್ಥಾಪಿಸಿದ್ದ 'ಫಾರ್ವರ್ಡ್' ದಿನಪತ್ರಿಕೆಯ ನಿರ್ವಹಣೆಯ ಜವಾಬ್ದಾರಿ. ೧೯೨೫ರ ಜೂನ್ ೧೬, ದಾಸ್‌ರ ನಿಧನ, ಕ್ರಾಂತಿಕಾರಿ ಚಟುವಟಿಕೆಗಳಿಗಾಗಿ ಬೋಸ್‌ರ ಬಂಧನ, ಬಿಡುಗಡೆ.

೧೯೨೮ರ ನವೆಂಬರ್‌ನಲ್ಲಿ ಬಂಗಾಳಪ್ರದೇಶ ಕಾಂಗ್ರೆಸ್‌ನ ಅಧ್ಯಕ್ಷರಾಗಿ ಆಯ್ಕೆ, ಆದರೆ ಗಾಂಧಿ ಪ್ರಣೀತ ಮಂದ ಮಾರ್ಗಕ್ಕಿಂತ ಸುಭಾಷ್‌ರದು ತೀರಾ ಭಿನ್ನ ಎಂಬುದು ಕ್ರಮೇಣ ಗೊತ್ತಾಯಿತು. ಹತ್ತಾರು ಚಳುವಳಿಗೆ ನೇತೃತ್ವ, ಅಖಿಲಭಾರತ ಟ್ರೇಡ್ ಯೂನಿಯನ್ ಕಾಂಗ್ರೆಸ್‌ನ ಅಧ್ಯಕ್ಷರಾಗಿ ಆಯ್ಕೆ.೧೯೩೩, ಫೆಬ್ರುವರಿ ೨೩ರಂದು ಯೂರೋಪಿನಲ್ಲಿ ಭಾರತದ ಸ್ವಾತಂತ್ರ್ಯ ಹೋರಾಟಪರ ಅಭಿಯಾನ. ಇಂಗ್ಲೆಂಡ್, ಆಸ್ಟ್ರಿಯಾ, ಇಟಲಿ ವಿಯೆನ್ನಾಗಳ ಭೇಟಿ, ತ್ವರಿತಗತಿಯ ಪ್ರವಾಸ, ಮಿಂಚಿನ ಓಡಾಟ. ಸ್ವಿಟ್ಜರ್ಲೆಂಡ್, ಚೆಕೋಸ್ಲೋವಾಕಿಯಾ, ಪೋಲೆಂಡ್, ಜರ್ಮನಿಗಳಲ್ಲಿ ಭಾರತದ ಪರ ಪ್ರಚಾರ. ಇಟಲಿ ಪ್ರಧಾನಿ ಬೆನಿತೋ ಮುಸ್ಸೋಲಿನಿ ಜತೆ ಚರ್ಚೆ. ೧೯೩೬ ಏಪ್ರಿಲ್ ೮ರಂದು ಮರಳಿ ಭಾರತಕ್ಕೆ, ಬಂದರಲ್ಲೇ ಬಂಧನ. ೧೯೩೭ರಲ್ಲಿ ಮತ್ತೆ ಆಸ್ಟ್ರಿಯಾ ಪಯಣ.

## ವಿಮಾನ ಅಪಘಾತದಲ್ಲೇ ಬೋಸ್ ಸಾವು

ನೇತಾಜಿ ಸುಭಾಷ್‌ಚಂದ್ರ ಬೋಸ್ ಅವರು 1945ರ ಆಗಸ್ಟ್ 18ರಂದು ತೈವಾನ್‌ನಲ್ಲಿ ಸಂಭವಿಸಿದ ವಿಮಾನ ಅಪಘಾತದಲ್ಲೇ ಮೃತಪಟ್ಟಿದ್ದಾರೆ ಎಂದು ಜಪಾನ್ ಸರ್ಕಾರ ಬಿಡುಗಡೆ ಮಾಡಿರುವ ವರದಿ ತಿಳಿಸಿವೆ.ನೇತಾಜಿ ಸುಭಾಷ್‌ಚಂದ್ರ ಬೋಸ್ ಅವರು 1945ರ ಆಗಸ್ಟ್ 18ರಂದು ತೈವಾನ್‌ನಲ್ಲಿ ಸಂಭವಿಸಿದ ವಿಮಾನ ಅಪಘಾತದಲ್ಲೇ ಮೃತಪಟ್ಟಿದ್ದಾರೆ ಎಂದು ಜಪಾನ್ ಸರ್ಕಾರ ಬಿಡುಗಡೆ ಮಾಡಿರುವ ವರದಿ ತಿಳಿಸಿವೆ. ಬೋಸ್ ಅವರ ಸಾವಿನ ಕುರಿತ 60 ವರ್ಷದ ಹಳೆಯ ವರ್ಗೀಕೃತ ದಾಖಲೆಗಳನ್ನು ಜಪಾನ್ ಸರ್ಕಾರ ಗುರುವಾರ ಸಾರ್ವಜನಿಕವಾಗಿ ಬಹಿರಂಗಪಡಿಸಿದೆ. ಸುಭಾಷ್ ಸಾವಿನ ಕುರಿತ ದಾಖಲೆಗಳಿಗಾಗಿಯೇ ರೂಪಿಸಲಾಗಿರುವ 'ಬೋಸ್‌ಫೈಲ್ಸ್.ಇನ್ಫೊ' ವೆಬ್ ಸೈಟ್‌ನಲ್ಲಿ ಮೊದಲ ಬಾರಿ ಈ ದಾಖಲೆಗಳನ್ನು ಉಲ್ಲೇಖಿಸಿ ವರದಿ ಪ್ರಕಟಿಸಲಾಗಿದೆ. ಸುಭಾಷ್ ಚಂದ್ರ ಬೋಸ್ ಅವರ ಸಾವಿಗೆ ಕಾರಣಗಳು ಮತ್ತು ಇತರ ವಿಷಯಗಳು' ಶೀರ್ಷಿಕೆ ಅಡಿಯಲ್ಲಿ ಈ ಬಗ್ಗೆ ವರದಿಯನ್ನು ಪ್ರಕಟಿಸಲಾಗಿದೆ. ಬೋಸ್ ಅವರ ಸಾವಿನ ಕುರಿತು 1956ರಲ್ಲೇ ವರದಿಯನ್ನು ಸಿದ್ಧಪಡಿಸಿ ಟೊಕಿಯೊದಲ್ಲಿನ ಭಾರತೀಯ । ಸಲ್ಲಿಸಲಾಗಿತ್ತು. ಆದರೆ, ವರ್ಗೀಕೃತ ದಾಖಲೆಗಳಾಗಿದ್ದರಿಂದ ಇಲ್ಲಿಯವರೆಗೂ ಭಾರತ ಅಥವಾ ಜಪಾನ್ ಈ ವರದಿಯನ್ನು ಬಹಿರಂಗಪಡಿಸಿರಲಿಲ್ಲ' ಎಂದು ವೆಬ್‌ಸೈಟ್ ತಿಳಿಸಿದೆ. ಜಪಾನ್ ಭಾಷೆಯಲ್ಲಿನ 7 ಪುಟಗಳು ಮತ್ತು ಇಂಗ್ಲಿಷ್‌ಗೆ ಭಾಷಾಂತರಿಸಿದ 10 ಪುಟಗಳ ವರದಿ ಇದಾಗಿದೆ.

1945ರ ಆಗಸ್ಟ್ 18ರಂದು ಬೋಸ್ ಅವರಿದ್ದ ವಿಮಾನ ಅಪಘಾತಕ್ಕೀಡಾಯಿತು. ಅದೇ ದಿನ ಸಂಜೆ ತೈಪೆ ಆಸ್ಪತ್ರೆಯಲ್ಲಿ ಅವರು ಮೃತಪಟ್ಟರು ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಬೋಸ್ ಅವರು ಪ್ರಯಾಣಿಸುತ್ತಿದ್ದ ವಿಮಾನ, ಹಾರಾಟ ಆರಂಭಿಸಿದ ತಕ್ಷಣ ನೆಲಕ್ಕೆ ಅಪ್ಪಳಿಸಿತು. ಆಗ ಬೋಸ್ ಅವರು ತೀವ್ರ ಗಾಯಗೊಂಡರು. ಮಧ್ಯಾಹ್ನ 3 ಗಂಟೆಗೆ ತೈಪೆಯ ಸೇನಾ ಆಸ್ಪತ್ರೆಗೆ ಬೋಸ್ ಅವರನ್ನು ದಾಖಲಿಸಲಾಯಿತು. ಬಳಿಕ 7 ಗಂಟೆಗೆ ಅವರು ಮೃತಪಟ್ಟರು. ಆಗಸ್ಟ್ 22ರಂದು ಬೋಸ್ ಅವರ ಅಂತ್ಯಕ್ರಿಯೆ ನಡೆಸಲಾಯಿತು' ಎಂದು ವರದಿ ತಿಳಿಸಿದೆ. ವಿಮಾನ ಅಪಘಾತಕ್ಕೀಡಾದ ವಿವರಗಳನ್ನು ಸಹ ವರದಿಯಲ್ಲಿ ತಿಳಿಸಲಾಗಿದೆ. ವಿಮಾನ ಹಾರಾಟ ಆರಂಭಿಸಿ 20 ಮೀಟರ್ ಎತ್ತರಕ್ಕೆ ಹೋದ ಬಳಿಕ ಎಡಬದಿಯ ರೆಕ್ಕೆಗೆ ಧಕ್ಕೆಯಾಯಿತು. ಬಳಿಕ ಎಂಜಿನ್‌ಗೂ ಧಕ್ಕೆಯಾಗಿ ಕೆಲವೇ ಕ್ಷಣಗಳಲ್ಲಿ ವಿಮಾನ ಬೆಂಕಿಗೆ ಆಹುತಿಯಾಯಿತು. ಈ ಘಟನೆಯಲ್ಲಿ ತೀವ್ರ ಗಾಯಗೊಂಡಿದ್ದ ಬೋಸ್ ಅವರು ಸಾಹಸಪಟ್ಟು ವಿಮಾನದಿಂದ ಕೆಳಗೆ ಇಳಿದರು (ಲಂಡನ್ ನಿಂದ ಬಂದ ವರದಿ). (ಜಪಾನ್ ಸರ್ಕಾರ ಬಿಡುಗಡೆ ಮಾಡಿರುವ ಈ ವರದಿಯು ಭಾರತ ಸರ್ಕಾರ 1956ರಲ್ಲಿ ರಚಿಸಿದ್ದ ಶಹ ನವಾಜ್ ಖಾನ್ ನೇತೃತ್ವದ ತನಿಖಾ ವರದಿಯನ್ನು ಅನುಮೋದಿಸುತ್ತದೆ ಎಂದು ವೆಬ್‌ಸೈಟ್ ತಿಳಿಸಿದೆ.)

### ಬೋಸರ ಅಂತಿಮದಿನದ ಕಡತಗಳು

ಪ್ರಧಾನಿ ನರೇಂದ್ರ ಮೋದಿ ಅವರು 2016ರ ಜನವರಿಯಲ್ಲಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮದಿನದಂದು ಈ ಸ್ವಾತಂತ್ರ್ಯ ಹೋರಾಟಗಾರನಿಗೆ ಸಂಬಂಧಿಸಿದ, ಕೇಂದ್ರ ಸರ್ಕಾರದ ವಶದಲ್ಲಿದ್ದ ವರ್ಗೀಕೃತ ಕಡತಗಳನ್ನು ಬಹಿರಂಗಪಡಿಸುವ ಕೆಲಸಕ್ಕೆ ಚಾಲನೆ ನೀಡಿದರು. ಮೋದಿ ಅವರ ಪ್ರವೃತ್ತಿಗೆ ಅನುಗುಣವಾಗಿ ಈ ಕಾರ್ಯಕ್ರಮ ಭಾರಿ ಅಬ್ಬರದ ಪ್ರದರ್ಶನವಾಗಿಯೇ ನಡೆಯಿತು. ಭಾವುಕ ಸಂಶೋಧಕರ ಗುಂಪೊಂದು ಎನ್‌ಡಿಎ ಸರ್ಕಾರದ ಮನವೊಲಿಸಿತು. ಈ ಅಂಶಗಳೆಂದರೆ, 1. ಈಗ ಹೇಳಿರುವಂತೆ, 1945ರ ಆಗಸ್ಟ‌ನಲ್ಲಿ ತೈವಾನ್‌ನಲ್ಲಿ ನಡೆದ ವಿಮಾನ ಅಪಘಾತದಲ್ಲಿ ಬೋಸ್ ಸತ್ತಿಲ್ಲ ಮತ್ತು 2. ಬೋಸ್ ಅವರ ಜೀವನ ಮತ್ತು ಸಾವಿನ ಬಗೆಗಿನ ನೆನಪುಗಳನ್ನು ಮುಚ್ಚಿಡುವ ಮೂಲಕ ಜವಾಹರಲಾಲ್ ನೆಹರೂ ನೇತೃತ್ವದ ಕಾಂಗ್ರೆಸ್ ಸರ್ಕಾರ ಅವರಿಗೆ ಅವಮಾನ ಮಾಡಿದೆ ಎಂದು ದೂರಿದರು. ಕಡತ ಬಹಿರಂಗಪಡಿಸುವ ಪ್ರಕ್ರಿಯೆ ಆರಂಭ ಆಗಿ ಒಂದು ವರ್ಷ ಆಗಿದೆ. ಈಗಾಗಲೇ 1200 ಕಡತಗಳನ್ನು ಬಹಿರಂಗ ಮಾಡಲಾಗಿದ್ದು ಯಾವ ಕಡತವೂ ಪಿತೂರಿ ಸಿದ್ಧಾಂತವನ್ನು ದೃಢಪಡಿಸಿಲ್ಲ. ಅಷ್ಟೇ ಅಲ್ಲ, ವಾಸ್ತವದಲ್ಲಿ, ಬೋಸ್ ಅವರ ಮಗಳು ಆಸ್ಟ್ರಿಯಾದಲ್ಲಿ ನೆಲೆಸಿದ್ದ ಅನಿತಾ ಅವರಿಗೆ ಸರ್ಕಾರದ ಬೊಕ್ಕಸದಿಂದ ಭತ್ಯೆ ಮಂಜೂರು ಮಾಡುವ ಮೂಲಕ ನೆಹರೂ ಅತ್ಯಂತ ಗೌರವಪೂರ್ವಕವಾಗಿ ನಡೆದುಕೊಂಡಿದ್ದಾರೆ.